**Bangalore**
**Regional News**
**18.09.2025 / 6.40 pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧.  ವಿಜಯಪುರ ವಿಮಾನ ನಿಲ್ದಾಣ ಮೇಲ್ದರ್ಜೆಗೇರಿಸಲು ಸಂಪುಟ ಸಭೆಯಲ್ಲಿ ಅನುಮೋದನೆ

೨.  ಜಾತಿ ಜನಗಣತಿ ಸಮೀಕ್ಷೆ ಹಿನ್ನೆಲೆ - ಸಚಿವರು, ಆಯೋಗದ ಅಧಿಕಾರಿಗಳೊಂದಿಗೆ ಉಪಮುಖ್ಯಮಂತ್ರಿ ಚರ್ಚೆ

೩.  ಅಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತ ಕಳವು ಆಗಿಲ್ಲ; ಕೇಂದ್ರ ಚುನಾವಣಾ ಆಯೋಗ ಸ್ಪಷ್ಟನೆ.

೪.  ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ತ್ವರಿತವಾಗಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಮುಖ್ಯ ಆಯುಕ್ತ ಮಹೇಶ್ವರ ರಾವ್ ಸೂಚನೆ

೫.  ಮಳೆ ಹಾನಿ, ಬೆಳೆ ನಷ್ಟ ಪರಿಹಾರ ಹೆಚ್ಚಿಸುವಂತೆ ಸರ್ಕಾರಕ್ಕೆ ರೈತ ಮುಖಂಡರಿಂದ ಮನವಿ

**********************

ರಾಜ್ಯದ ೯ ಸಾವಿರದ ೩೩೭ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಸಿದ್ಧಪಡಿಸಲು ಹೊಸ ಪಾತ್ರೆ ಪರಿಕರಗಳನ್ನು ಖರೀದಿಸುವ ಅನುದಾನವನ್ನು ಕ್ಷೀರಭಾಗ್ಯ ಯೋಜನೆಯಡಿ ೨೧ ಕೋಟಿ ೫೫ ಲಕ್ಷ ಅಂದಾಜು ಮೊತ್ತದಲ್ಲಿ ನೀಡಲು ಸಂಪುಟ ಸಭೆ ಒಪ್ಪಿಗೆ ನೀಡಿದೆ. ಕರ್ನಾಟಕ ಲೋಕಸೇವಾ ಆಯೋಗದ ೨೦೨೪-೨೫ನೇ ಸಾಲಿನ ವಾರ್ಷಿಕ ವರದಿ ಮಂಡಿಸಲಾಗಿದ್ದು, ಒಪ್ಪಿಗೆ ನೀಡಲಾಗಿದೆ. ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ೬೧೮ ಕೋಟಿ ೭೫ ಲಕ್ಷ ರೂಪಾಯಿಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ದೌರ್ಜನ್ಯಕ್ಕೊಳಗಾಗಿ ಮೃತಪಟ್ಟ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಕ್ಕೆ ಸೇರಿದ ವ್ಯಕ್ತಿಗಳ ಅವಲಂಬಿತರಿಗೆ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡಲು ಅನುಮೋದನೆ ದೊರೆತಿದೆ. ಇದೇ ವೇಳೆ ಮುಂದಿನ ಪಂಚಾಯತ್ ಚುನಾವಣೆಯಲ್ಲಿ ಮತಪತ್ರ ಮಾಡುವುದರ ಬಗ್ಗೆ ಸುಗ್ರೀವಾಜ್ಞೆ ಹೊರಡಿಸುವ ಅವಶ್ಯಕತೆ ಇದೆಯೋ ಇಲ್ಲವೋ ಎಂಬ ಬಗ್ಗೆಯೂ ಚರ್ಚೆ ನಡೆದಿದೆ. ಈ ಕುರಿತಂತೆ ಚುನಾವಣಾ ಆಯೋಗದ ಆಯುಕ್ತರ ಜೊತೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲು ಸಭೆಯಲ್ಲಿ ನಿರ್ಧರಿಸಲಾಗಿದೆ.

**********************

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಇದೇ ೨೨ ರಿಂದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಜನಗಣತಿ ನಡೆಸುತ್ತಿರುವ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಇಂದು ಸಚಿವರು ಹಾಗೂ ಆಯೋಗದ ಪ್ರತಿನಿಧಿಗಳ ಪೂರ್ವಭಾವಿ ಸಭೆ ನಡೆಸಿದರು. ಸಭೆಯಲ್ಲಿ ಸಚಿವರಾದ ಎಚ್ ಕೆ ಪಾಟೀಲ್, ಕೆ ಎಚ್ ಮುನಿಯಪ್ಪ, ಈಶ್ವರ್ ಖಂಡ್ರೆ, ದಿನೇಶ್ ಗುಂಡೂರಾವ್, ಜಮೀರ್ ಅಹ್ಮದ್ ಖಾನ್, ಶಿವರಾಜ್ ತಂಗಡಗಿ, ಸಂತೋಷ್ ಲಾಡ್ ಹಾಗೂ ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್, ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿದ್ದರು.

**********************

ಸಾರ್ವಜನಿಕರು ಆನ್ ಲೈನ್ ನಲ್ಲಿ ಮತದಾರರ ಹೆಸರನ್ನು ಅಳಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಮತದಾರರ ಪಟ್ಟಿಯಿಂದ ಹೆಸರು ಅಳಿಸುವಿಕೆ ಹಗರಣದಲ್ಲಿ ಭಾಗಿಯಾಗಿರುವವರನ್ನು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಕ್ಷಿಸುತ್ತಿದ್ದಾರೆ ಎಂಬ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಮಾಡಿರುವ ಆರೋಪವನ್ನು ಆಧಾರ ರಹಿತ ಎಂದು ಹೇಳಿದೆ. ೨೦೧೮ ರಲ್ಲಿ ಆಳಂದದಲ್ಲಿ ಬಿಜೆಪಿಯ ಸುಭಾದ್ ಗುತ್ತೇದಾರ್ ಮತ್ತು ೨೦೨೩ ರಲ್ಲಿ ಕಾಂಗ್ರೆಸ್‌ನ ಬಿ.ಆರ್. ಪಾಟೀಲ್ ಗೆದ್ದಿದ್ದರು. ೨೦೨೩ ರಲ್ಲಿ ಕರ್ನಾಟಕದ ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರನ್ನು ಅಳಿಸಲು ಕೆಲವು ವಿಫಲ ಪ್ರಯತ್ನಗಳು ನಡೆದಿವೆ ಎಂಬುದನ್ನು ಚುನಾವಣಾ ಸಂಸ್ಥೆ ಒಪ್ಪಿಕೊಂಡಿದೆ. ಈ ವಿಷಯದ ಬಗ್ಗೆ ತನಿಖೆ ನಡೆಸಲು ಚುನಾವಣಾ ಆಯೋಗವೇ ಎಫ್ಐಆರ್ ದಾಖಲಿಸಿರುವುದಾಗಿ ಸ್ಪಷ್ಟಪಡಿಸಿದೆ.

**********************

ಚುನಾವಣಾ ಅಕ್ರಮದ ಬಗ್ಗೆ ಕಾಂಗ್ರೆಸ್ ನಾಯಕರು ಮಾಧ್ಯಮಗಳ ಮುಂದೆ ಮಾತಾಡುತ್ತಾರೆಯೇ ಹೊರತು ದಾಖಲೆಗಳನ್ನು ನೀಡಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ, ಮಾಲೂರು ಕ್ಷೇತ್ರದಲ್ಲಿ ನಡೆದಿರುವ ಅಕ್ರಮದ ಬಗ್ಗೆ ಮೊದಲು ಮಾತಾಡಲಿ ಎಂದು ಹೇಳಿದ್ದಾರೆ. ರಾಹುಲ್ ಗಾಂಧಿ ಮಹದೇವಪುರ ಕ್ಷೇತ್ರದಲ್ಲಿ ಚುನಾವಣಾ ಅಕ್ರಮ ನಡೆದಿದೆ ಎಂದು ಆರೋಪ ಮಾಡಿದ್ದು, ಅದು ಸುಳ್ಳು ಎಂದು ಸಾಬೀತಾಗಿದೆ. ಈಗ ಆಳಂದ ಕ್ಷೇತ್ರದಲ್ಲಿ ಅಕ್ರಮ ನಡೆದಿದೆ ಎಂದು ಆರೋಪ ಮಾಡಿದ್ದಾರೆ. ಬಿಹಾರದಲ್ಲಿ ಸೋಲುಬ ಭೀತಿಯಿಂದ ಕಾಂಗ್ರೆಸ್ ನಾಯಕರಿಗೆ ಭ್ರಮನಿರಸನವಾಗಿದೆ. ಅದಕ್ಕಾಗಿ ಮೊದಲೇ ಆರೋಪ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

*********************

ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಐದು ನಗರ ಪಾಲಿಕೆಗಳ ಅಧಿಕಾರಿಗಳೊಂದಿಗೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇಂದು ವರ್ಚ್ಯುವಲ್ ಮೂಲಕ ಸಭೆ ನಡೆಸಿ ತ್ವರಿತವಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಸೂಚನೆ ನೀಡಿದ್ದಾರೆ. ೫ ನಗರ ಪಾಲಿಕೆಗಳಿಗೆ ತಲಾ ೧೫ ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದ್ದು, ಈ ಅನುದಾನದಲ್ಲಿಯೇ ಹಣವನ್ನು ಹೊಂದಿಸಿಕೊಂಡು ರಸ್ತೆ ಗುಂಡಿಗಳನ್ನು ಮುಚ್ಚುವಂತೆ ತಿಳಿಸಿದ್ದಾರೆ. ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಎಷ್ಟು ರಸ್ತೆಗಳು ಬರಲಿವೆ, ರಸ್ತೆ ಗುಂಡಿಗಳ ಸಂಖ್ಯೆ, ಗುತ್ತಿಗೆದಾರರನ್ನು ನಿಯೋಜಿಸಿರುವ, ರಸ್ತೆ ಗುಂಡಿಗಳನ್ನು ಮುಚ್ಚಲು ತಗಲುವ ವೆಚ್ಚ, ಕೆಲಸ ಕೈಗೊಳ್ಳುವ ಮಾದರಿಯ ಕುರಿತು ವಿವರಣಾತ್ಮಕ ವರದಿ ನೀಡುವಂತೆ ಹೇಳಿದ್ದಾರೆ. ಬಳಿಕ ಜೆಸಿ ರಸ್ತೆಯಲ್ಲಿರುವ ವೈಟ್ ಟಾಪಿಂಗ್ ಕಾಮಗಾರಿ ನಡೆಯುವ ಸ್ಥಳಕ್ಕೆ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಜೆಸಿ ರಸ್ತೆಯ ಮಿನರ್ವ ವೃತ್ತದಿಂದ ಟೌನ್ ಹಾಲ್ ವರೆಗೆ ೧ ಕಿಲೋಮೀಟರ್ ಉದ್ದದ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಂಡಿದ್ದು, ಶೀಘ್ರಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲು ನಿರ್ದೇಶನ ನೀಡಿದ್ದಾರೆ.

*********************

ಮಳೆ ಹಾನಿ ಬೆಳೆನಷ್ಟ ಪರಿಹಾರ ಹೆಚ್ಚಿಸುವ ಕುರಿತಂತೆ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ರೈತ ಮುಖಂಡರ ನಿಯೋಗ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದೆ. ರಾಜ್ಯಾದ್ಯಂತ ಇರುವ ೩೮,೦೦೦ ಕೆರೆಗಳ ಹೂಳು ತೆಗೆಸಿ ರೈತರ ಜಮೀನಿಗೆ ಸರಬರಾಜು ಮಾಡಲು ಯೋಜನೆಯ ರೂಪಿಸಿ ಅನುದಾನ ನಿಗದಿ ಮಾಡಬೇಕು. ಕಬ್ಬಿನ ಉತ್ಪನ್ನ ವೆಚ್ಚ ಏರಿಕೆಯಾಗಿದ್ದು ಎಫ್ಆರ್‌ಪಿ ದರ ಸಮಂಜಸವಾಗಿಲ್ಲ. ಕಬ್ಬಿನ ಎಫ್ಆರ್‌ಪಿ ದರಕ್ಕೆ ಹೆಚ್ಚುವರಿಯಾಗಿ ರಾಜ್ಯ ಸಲಹಾ ಬೆಲೆ ನಿಗದಿ ಮಾಡಬೇಕು ಎಂದು ಒತ್ತಾಯಿಸಿದೆ. ರಾಜ್ಯಾದ್ಯಂತ ಅತಿವೃಷ್ಟಿ ಮಳೆ ಹಾನಿ ಪರಿಹಾರವನ್ನು ವೈಜ್ಞಾನಿಕವಾಗಿ ನಿರ್ಧರಿಸಿ ಮಳೆ ಆಶ್ರಯಿತ ಭೂಮಿಗೆ ಎಕರೆಗೆ ೧೫ ಸಾವಿರ ನೀರಾವರಿಗೆ ೪೦ ಸಾವಿರ ವಿತರಿಸುವಂತೆ ಮನವಿ ಮಾಡಿದ್ದಾರೆ. ಕೆಐಡಿಬಿ ರೈತರ ಜಮೀನು ವಶಪಡಿಸಿಕೊಂಡು ೧೫ ವರ್ಷವಾದರೂ ಯಾವುದೇ ಉದ್ದೇಶಕ್ಕೆ ಬಳಸದೆ ಖಾಲಿ ಬಿಟ್ಟಿರುವ ಜಮೀನುಗಳನ್ನು ರೈತರಿಗೆ ವಾಪಸ್ ನೀಡಬೇಕು ಎಂದು ಆಗ್ರಹಿಸಿದ್ದಾರೆ.

*********************

ಮಹಿಳೆಯರ ಆರೋಗ್ಯ ಕುರಿತು ಪ್ರಧಾನಿ ನರೇಂದ್ರ ಮೋದಿಯವರು ಕೈಗೊಂಡಿರುವ ಸ್ವಸ್ಥ ನಾರಿ-ಸಶಕ್ತ ಪರಿವಾರ್ ಅಭಿಯಾನ ಶ್ಲಾಘನೀಯವಾಗಿದೆ ಎಂದು ಕೋಲಾರ ಸಂಸದ ಎಂ. ಮಲ್ಲೇಶ್ ಬಾಬು ತಿಳಿಸಿದ್ದಾರೆ. ಈ ಯೋಜನೆಯ ಮೂಲಕ ಬಿ.ಪಿ.ಮಧುಮೇಹ, ಕ್ಯಾನ್ಸರ್ ಮುಂತಾದ ರೋಗಗಳನ್ನು ಮುಂಚಿತವಾಗಿ ಪತ್ತೆಹಚ್ಚಿ ತಕ್ಷಣ ಚಿಕಿತ್ಸೆ ಪಡೆಯಲು ಸಾಧ್ಯವಾಗಲಿದೆ. ಇದರಿಂದ ಬಡಕುಟುಂಬಗಳು ಆರ್ಥಿಕ ಸಂಕಷ್ಟದಿಂದ ಹಾಗೂ ಮಹಿಳೆಯರು ಅನಾರೋಗ್ಯದಿಂದ ಪಾರಾಗಲು ನೆರವಾಗಲಿದೆ ಎಂದು ಹೇಳಿದ್ದಾರೆ.

**********************

ರಾಷ್ಟ್ರ ಪ್ರಶಸ್ತಿ ವಿಜೇತ ಚಲನಚಿತ್ರ "ಚಲೋ ಜೀತೇ ಹೈ ರಾಜ್ಯದ ಹಲವೆಡೆ ಮರು-ಬಿಡುಗಡೆಯಾಗಿದೆ. ೨೦೧೮ರ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಕಿರು ಚಿತ್ರಗಳಲ್ಲಿ ಒಂದಾದ ಹಾಗೂ ವಿಮರ್ಶಾತ್ಮಕವಾಗಿ ಮೆಚ್ಚುಗೆ ಪಡೆದ ಈ ಚಲನಚಿತ್ರವು ಲಕ್ಷಾಂತರ ಶಾಲೆಗಳು ಸೇರಿದಂತೆ ದೇಶಾದ್ಯಂತ ಸುಮಾರು ೫೦೦ ಚಿತ್ರಮಂದಿರಗಳಲ್ಲಿ ಪ್ರದರ್ಶನಗೊಳ್ಳುತ್ತಿದೆ. ಬೆಂಗಳೂರಿನ ಎಂ ಜಿ ರೋಡ್ ನಲ್ಲಿರುವ ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯದಲ್ಲಿ ಈ ಚಿತ್ರ ಇಂದು ಪ್ರದರ್ಶನ ಕಂಡಿದ್ದು ೨ ಸಾವಿರದ ೮೦೦ ಮಕ್ಕಳು ವೀಕ್ಷಿಸಿದ್ದಾರೆ. ಈ ಕುರಿತಂತೆ ಪ್ರಾಂಶುಪಾಲರಾದ ಎಂ. ಭಾಗ್ಯಲಕ್ಷ್ಮಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ ಎಂ. ಭಾಗ್ಯಲಕ್ಷ್ಮಿ

ವಿದ್ಯಾರ್ಥಿಗಳಿಗೆ ಈ ಚಿತ್ರ ಸ್ಫೂರ್ತಿ ನೀಡಲಿದ್ದು, ಸ್ವಾಮಿ ವಿವೇಕಾನಂದರ ಆದರ್ಶ ಮನುಷ್ಯನ ಜೀವನದಲ್ಲಿ ಹೇಗೆ ಅವಲಂಭಿಸಿದೆ ಎಂಬುದನ್ನು ಈ ಚಿತ್ರ ಸಾರುತ್ತದೆ, ಎಂದು ಬೆಂಗಳೂರಿನ ಚಿತ್ರಮಂದಿರದಲ್ಲಿ ಪ್ರೇಕ್ಷಕರು ತಿಳಿಸಿದರು. ಇಂದಿನಿಂದ ಧಾರವಾಡದಲ್ಲಿ ಸ್ವಾಮಿ ವಿವೇಕಾನಂದರ ತತ್ವ ಸಿದ್ಧಾಂತ ಸಾರುವ ಚಿತ್ರ "ಚಲೋ ಜೀತೇ ಹೈ" - ಪ್ರದರ್ಶನವು ಐನಾಕ್ಸ್ ಸ್ಮಾರ್ಟ್ ಸಿಟಿ ಮಾಲ್ ನಲ್ಲಿ ನಡೆಯಲಿದೆ. ಜಿಲ್ಲೆಯಲ್ಲಿ ಇದೇ ೨೪ರವರೆಗೆ ಪ್ರತಿದಿನ ಸಂಜೆ ೬.೧೫ ಕ್ಕೆ ಚಿತ್ರ ಪ್ರಾರಂಭವಾಗಲಿದೆ. ಮಾಜಿ ಶಾಸಕ ಅಮೃತ ದೇಸಾಯಿ ಚಾಲನೆ ನೀಡಲಿದ್ದಾರೆ.

**********************